# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 626(708) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಪುಟ್ಟಣ್ಣ<br>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 18.08.2025 |

| ಕ್ರಮ. ಸಂಖ್ಯೆ. | ಪ್ರಶ್ನೆ | ಉತ್ತರ |
|---|---|---|
| (ಅ) | ದಿನಾಂಕ. 01.04.2006ರ ಹಿಂದೆ ಸರ್ಕಾರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ ನಂತರದ ದಿನಗಳಲ್ಲಿ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡು ವಿವಿಧ ಹುದ್ದೆಗಳಿಗೆ ಸೇರ್ಪಡೆಯಾಗಿ ವಿಶ್ವವಿದ್ಯಾನಿಲಯಗಳಲ್ಲಿ ಯುಜಿಸಿ ವೇತನ ಪಡೆದು ಕಾರ್ಯನಿರ್ವಹಿಸುತ್ತಿರುವ ಬೋಧಕ ಬೋಧಕೇತರರಿಗೆ ಹಳೆಯ ಪಿಂಚಣಿ ಯೋಜನೆಯನ್ನು ನೀಡದೆ ಇರಲು ಕಾರಣಗಳೇನು; (ವಿವರ ನೀಡುವುದು) | ರಾಜ್ಯ ಸರ್ಕಾರದ ಸೇವೆಗೆ ದಿನಾಂಕ. 01.04.2006 ರಂದು ಅಥವಾ ತರುವಾಯ ಸೇರುವ ಎಲ್ಲಾ ನೇಮಕಾತಿದಾರರಿಗೆ ಕಡ್ಡಾಯಗೊಳ್ಳುವಂತೆ ಈ ಮುನ್ನ ಜಾರಿಯಲ್ಲಿದ್ದ ಪ್ರಯೋಜನಾತ್ಮಕ ನಿವೃತ್ತಿ ಸೌಲಭ್ಯಕ್ಕೆ ಬದಲಾಗಿ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಕೊಡುಗೆ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: FD (Spl) 04 PET 2005, ದಿನಾಂಕ. 31.03.2006ರನ್ವಯ ಜಾರಿಗೊಳಿಸಿರುವುದಾಗಿದೆ.<br><br>ದಿನಾಂಕ: 01.04.2006ರ ನಂತರದಲ್ಲಿ ಸರ್ಕಾರಿ ಸೇವೆಗೆ ಹೊಸದಾಗಿ ಸೇರುವ ನೌಕರರ ಪ್ರಕರಣಗಳಲ್ಲಿ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯು ಅನ್ವಯವಾಗತಕ್ಕದ್ದಲ್ಲ. |
| (ಆ) | ಆರ್ಥಿಕ ಇಲಾಖೆಯು ದಿನಾಂಕ: 24.01.2024ರಂದು ಹೊರಡಿಸಿರುವ ಆದೇಶದಲ್ಲಿ 01.04.2006ರಂದು ಹೊರಡಿಸಿರುವ ಆದೇಶದಲ್ಲಿ ದಿನಾಂಕ: 01.04.2006ರ ಪೂರ್ವದಲ್ಲಿ ಅರ್ಜಿ ಸಲ್ಲಿಸಿ, ನಂತರ ಹಲವಾರು ಇಲಾಖೆಗಳಲ್ಲಿ ವಿವಿಧ ಹುದ್ದೆಗಳಿಗೆ ಸೇರ್ಪಡೆಯಾಗಿರುವವರಿಗೆ ಹಳೆಯ ಪಿಂಚಣಿ ಯೋಜನೆಯನ್ನು ನೀಡಲಾಗಿದೆಯೇ; | ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್/99/2023, ದಿನಾಂಕ: 24.01.2024ರನ್ವಯ ದಿನಾಂಕ: 01.04.2006ರ ಪೂರ್ವದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಖಾಲಿ ಹುದ್ದೆಗಳ ಭರ್ತಿಗಾಗಿ ಹೊರಡಿಸಿದ ನೇಮಕಾತಿ ಅಧಿಸೂಚನೆಗಳ ಮೇರೆಗೆ ಆಯ್ಕೆ ಹೊಂದಿ ದಿನಾಂಕ: 01.04.2006ರಂದು ಅಥವಾ ಆ ದಿನಾಂಕದ ನಂತರ ಸೇವೆಗೆ ಸೇರಿರುವ ಕಾರಣದಿಂದ ನೂತನ ಅಂಶದಾಯಿ ಕೊಡುಗೆ ಯೋಜನೆಯ (ರಾಷ್ಟ್ರೀಯ ಪಿಂಚಣಿ ಯೋಜನ) ವ್ಯಾಪ್ತಿಗೊಳಪಟ್ಟಿರುವ ಸರ್ಕಾರಿ |

| | | |
|---|---|---|
| | | ನೌಕರರನ್ನು ಸರ್ಕಾರವು ಅವರ ಅಭಿಮತದ ಮೇರೆಗೆ ಕೆಲವು ಷರತ್ತುಗಳಿಗೊಳಪಟ್ಟು ಒಂದು ಬಾರಿಯ ಕ್ರಮವಾಗಿ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೆ ಒಳಪಡಿಸಲು ಒಪ್ಪಿಗೆ ನೀಡಿದೆ. |
| **(ಇ)** | ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಯುಜಿಸಿ ವೇತನ ಪಡೆಯುತ್ತಿರುವ ಪ್ರಾಧ್ಯಾಪಕರಿಗೆ ಹಳೆಯ ಪಿಂಚಣಿ ಯೋಜನೆ ಜಾರಿಗೊಳಿಸಿ ವಿಶ್ವವಿದ್ಯಾನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಅನ್ವಯಿಸುವುದಿಲ್ಲವೆಂದು ಆರ್ಥಿಕ ಇಲಾಖೆಯಿಂದ ಆದೇಶ ಹೊರಡಿಸಲಾಗಿದೆಯೇ (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್/99/2023, ದಿನಾಂಕ: 24.01.2024ರ ಆದೇಶವು ರಾಜ್ಯ ಸಿವಿಲ್ ಸೇವೆಯಲ್ಲಿನ ಹುದ್ದೆಗಳಿಗೆ ಅನ್ವಯವಾಗುವುದರಿಂದ, ನಿಗಮ/ ಮಂಡಳಿ/ವಿಶ್ವವಿದ್ಯಾಲಯಗಳು/ಇತರೇ ಸ್ವಾಯತ್ತ ಸಂಸ್ಥೆಗಳಿಂದ ಬರುವ ಪ್ರಸ್ತಾವನೆಗಳನ್ನು ಪರಿಗಣಿಸಲು ಅವಕಾಶವಿರುವುದಿಲ್ಲ. |
| **(ಈ)** | ರಾಜ್ಯದ ವಿವಿಧ ಸರ್ಕಾರಿ ವಿಶ್ವವಿದ್ಯಾನಿಲಯಗಳಿಂದ ಅರ್ಹ ಬೋಧಕ ಬೋಧಕೇತರರಿಗೆ ಆರ್ಥಿಕ ಇಲಾಖೆಯ ಅಧಿಸೂಚನೆಯನ್ವಯ ಪದವಿ ಕಾಲೇಜಿನ ಅಧ್ಯಾಪಕರಿಗೆ ಹಳೆ ಪಿಂಚಣಿ ಸೌಲಭ್ಯ ನೀಡಿ ವಿಶ್ವವಿದ್ಯಾಲಯದ ನೌಕರರಿಗೆ ನೀಡದೆ ಇರಲು ಕಾರಣಗಳೇನು? | ಉತ್ತರ (ಇ)ರಲ್ಲಿರುವ ಅಂಶವು ಸಹ ಈ ಪ್ರಶ್ನೆಗೆ ಅನ್ವಯಿಸುತ್ತದೆ. |

ಸಂಖ್ಯೆ: ಇಡಿ/385/ಯುಆರ್ ಸಿ /2025

(ಡಾ|| ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು